# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

### ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

### ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 18-04-2022. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ. ನೋಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ. ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ. ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ).
4. ಶ್ರೀ.ಮಹಾಂತೇಶ್ ಉಜ್ಜನಿಕೊಪ್ಪ ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ.ವಿವೇಕ್. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ. ಸಭೆಯಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೊಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ -01ರಲ್ಲಿನ ಮಾರುತಿನಗರ 20ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಉರಿಯುತ್ತಿಲ್ಲವೆಂದು ಸ್ಥಳೀಯರು ಸಭೆಯಲ್ಲಿ ಕೋರಿದರು.

2. ಕೆಂಪೇಗೌಡ ವಾರ್ಡ್ ವಾರ್ಡ್ ನಂ-01ರ ಸರ್ಕಾರಿ ಆಸ್ಪತ್ರೆ ಮುಂಭಾಗದಲ್ಲಿ ಸಿ.ಸಿ. ಕ್ಯಾಮೇರಾ ಅಳವಡಿಸುವಂತೆ ಸ್ಥಳೀಯ ಸಾರ್ವಜನಿಕರು ಪ್ರಸ್ತಾವನೆ ಸಲ್ಲಿಸಿದರು.

3. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಅಂಗಡಿಗಳಲ್ಲಿ ಪ್ಲಾಸ್ಟಿಕ್‌ಗಳನ್ನು ಬಳಸುತ್ತಿದ್ದು, ಇದನ್ನು ಕೂಡಲೇ ವೀಕ್ಷಣೆ ಮಾಡಿ ಸದರಿ ಅಂಗಡಿಗಳ ಮಾಲೀಕರಿಗೆ ದಂಡ ವಿಧಿಸಿ ಪ್ಲಾಸ್ಟಿಕ್‌ಗಳನ್ನು ಜಪ್ತಿಮಾಡಿಕೊಳ್ಳಬೇಕೆಂದು ಸ್ಥಳೀಯರು ಸಭೆಯಲ್ಲಿ ಕೋರಿದರು.

4. ಯಲಹಂಕ ಒಲ್ಡ್ ಟೌನ್‌ನಲ್ಲಿ 401 ಬಸ್ ನಿಲ್ದಾಣದಲ್ಲಿ ಟ್ರಾಫಿಕ್ ಜಾಮ್ ಉಂಟಾಗುತ್ತಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸಾರ್ವಜನಿಕರು ಕೋರಿದರು.

5. ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಸುಮಾರು ಸಾವಿರಾರು ಅಂಗಡಿಗಳು ಅನಧಿಕೃತವಾಗಿ ನಡೆಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿ ಈ ಅಂಗಡಿಗಳಿಗೆ ಪರವಾನಗಿ ನೀಡಲು ಸಭೆಯಲ್ಲಿ ಕೋರಿದರು.

6. ಕೆಂಪೇಗೌಡ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಮಾರುತಿನಗರ 1ನೇ ಮುಖ್ಯರಸ್ತೆಯಲ್ಲಿರುವ ಬ್ಲಾಕ್ ಸ್ಪಾರ್ಟ್ ಇದ್ದು, ಇದರಲ್ಲಿ ಕಸವನ್ನು ತೆಗೆದಿರುವುದಿಲ್ಲ ಎಂದು ಸಾರ್ವಜನಿಕರು ಸಭೆಯಲ್ಲಿ ದೂರನ್ನು ಸಲ್ಲಿಸಿದರು.

P.T.O

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ. ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೋಡಲ್ ಅಧಿಕಾರಿಗಳು
ವಾರ್ಡ್ ಕಮಿಟಿ. ವಾರ್ಡ್ ನಂ. 01(ಕೆಂಪೇಗೌಢ)

ಪ್ರತಿಯನ್ನು:
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು. ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು. (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.